## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 123(1091)

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 25-02-2022

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| (ಅ) | ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿ ಕ್ಷೇತ್ರಗಳ ಮರು ವಿಂಗಡಣೆ ಮತ್ತು ಮೀಸಲಾತಿ ನಿಗದಿಗೆ ಸರ್ಕಾರ ಯಾವ ದಿನಾಂಕದಂದು ಅಧಿಸೂಚನೆ ಹೊರಡಿಸಿದೆ; | ಅಧಿಸೂಚನೆ ಹೊರಡಿಸಿರುವುದಿಲ್ಲ. |
| (ಆ) | ಮರು ವಿಂಗಡಣೆ ಮತ್ತು ಮೀಸಲಾತಿ ನಿಗದಿಗೊಳಿಸುವಲ್ಲಿ ಪ್ರಸ್ತುತ ಅನುಸರಿಸುತ್ತಿರುವ ಮಾನದಂಡಗಳೇನು; (ವಿವರ ನೀಡುವುದು) | ಪಂಚಾಯತ್ ಕ್ಷೇತ್ರಗಳ ಸೀಮಾ ನಿರ್ಣಯಕ್ಕೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 319 ಜಿಪಸ 2021, ದಿನಾಂಕ:13-10-2021ರನ್ವಯ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ರಚಿಸಲಾಗಿದ್ದು, ಸದರಿ ಆಯೋಗವು ಈ ನಿಟ್ಟಿನಲ್ಲಿ ಕಾರ್ಯನಿರತವಾಗಿರುತ್ತದೆ. ಕ್ಷೇತ್ರಗಳ ಮರುವಿಂಗಡಣೆಗೆ ಸಂಬಂಧಿಸಿದಂತೆ ಆಯೋಗವು ಅದರ ಸ್ವಂತ ಕಾರ್ಯವಿಧಾನವನ್ನು ನಿರ್ಧರಿಸಿಕೊಳ್ಳುತ್ತದೆ. |
| (ಇ) | ಮರುವಿಂಗಡಣೆ ಕಾರ್ಯ ಯಾವ ಹಂತದಲ್ಲಿದೆ: | ಆಯೋಗವು ಪ್ರಥಮ ಹಂತದ ಪ್ರಕ್ರಿಯೆಯ ಭಾಗವಾಗಿ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಭೆಯನ್ನು ನಡೆಸಿರುತ್ತದೆ. ಜಿಲ್ಲಾಧಿಕಾರಿಗಳಿಂದ ಜಿಲ್ಲೆಯ ಹಾಗೂ ತಾಲ್ಲೂಕು ವ್ಯಾಪ್ತಿಯ ಜನಸಂಖ್ಯೆ ವರದಿಯನ್ನು ಪಡೆದು ಪರಿಶೀಲಿಸಲಾಗುತ್ತಿದೆ. ಈ ಸಂಬಂಧವಾಗಿ ರಾಜ್ಯ ಚುನಾವಣಾ ಆಯೋಗದ ಕಾರ್ಯದರ್ಶಿಗಳು, ಕಾನೂನು ಇಲಾಖೆಯ ಅಧಿಕಾರಿಗಳು ಮತ್ತು ಇನ್ನಿತರೆ ಅಧಿಕಾರಿಗಳೊಂದಿಗೆ ಸಭೆಗಳನ್ನು ನಡೆಸಲಾಗಿರುತ್ತದೆ. |
| (ಈ) | ಜನಪ್ರತಿನಿಧಿಗಳು ಇಲ್ಲದಿರುವುದರಿಂದ ಗ್ರಾಮೀಣ ಪ್ರದೇಶದ ಅಭಿವೃದ್ಧಿ ಹಾಗು | ಬಂದಿದೆ.<br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 321ರಲ್ಲಿ ಪ್ರದತ್ತವಾದ |

| | | |
|---|---|---|
| | ಜನಸಾಮಾನ್ಯರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಅಧಿಕಾರವನ್ನು ಚಲಾಯಿಸಿ, ಸರ್ಕಾರವು ಆದೇಶ ಸಂಖ್ಯೆ:ಗ್ರಾಅಪಂರಾ 212 ಜಿಪಸ 2021 ದಿನಾಂಕ: 26-04-2021 ಹಾಗೂ ತಿದ್ದುಪಡಿ ಆದೇಶ ದಿನಾಂಕ: 28-04-2021ರಲ್ಲಿ ಕರ್ನಾಟಕ ಗ್ರಾಮ್ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 239ರನ್ವಯ ರಾಜ್ಯದ ಜಿಲ್ಲಾ ಪಂಚಾಯತಿ ಹಾಗು ತಾಲ್ಲೂಕು ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿರುತ್ತದೆ. ಸದರಿ ಆಡಳಿತಾಧಿಕಾರಿಗಳು ಪ್ರಕರಣ 239(2)ರನ್ವಯ ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿಯ ಹಾಗೂ ಸಂಬಂಧಪಟ್ಟ ಅಧ್ಯಕ್ಷರುಗಳು ನಿರ್ವಹಿಸಬೇಕಾದ ಎಲ್ಲಾ ಅಧಿಕಾರಗಳು ಮತ್ತು ಕರ್ತವ್ಯಗಳನ್ನು ನೆರವೇರಿಸಲು ಅಧಿಕಾರ ಹೊಂದಿರುತ್ತಾರೆ. ಆಡಳಿತಾಧಿಕಾರಿಗಳ ಅವಧಿಯನ್ನು ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 212 ಜಿಪಸ 2021 ದಿನಾಂಕ: 29-10-2021ರಲ್ಲಿ ಮತ್ತೆ ಮುಂದಿನ 6 ತಿಂಗಳು ಅಥವಾ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ಚುನಾವಣೆ ನಡೆಯುವವರೆಗೆ ವಿಸ್ತರಿಸಲಾಗಿರುತ್ತದೆ.<br>ರಾಜ್ಯದ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಿರುವುದರಿಂದ ಹಾಗೂ ಜನಸಮಾನ್ಯರ ತೊಂದರೆಗಳನ್ನು ಪರಿಶೀಲಿಸಿ ಬಗೆಹರಿಸಲು ಆಡಳಿತಾಧಿಕಾರಿಗಳಿಗೆ ಅಧಿಕಾರ ಇರುವುದರಿಂದ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗಿರುವುದಿಲ್ಲ. |
| (ಉ) | ಯಾವ ಕಾಲಮಿತಿಯಲ್ಲಿ ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿಗಳಿಗೆ ಚುನಾವಣೆ ನಡೆಸಲಾಗುವುದು? | ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವು ನಿಯಮಾನುಸಾರ ಪರಿಶೀಲಿಸಿ ಸರ್ಕಾರಕ್ಕೆ ಸೂಕ್ತ ವರದಿಯನ್ನು ಸಲ್ಲಿಸಿದ ನಂತರ ವರದಿಯನ್ನು ಪರಿಶೀಲಿಸಿ ಚುನಾವಣೆ ನಡೆಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಗ್ರಾಅಪಂರಾ 91 ಜಿಪಸ 2022

(ಕೆ.ಎಸ್.ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.